**JANUARY 07, 2026**
**AKASHAVANI - DHARWAD**
**(KANNADA) 07.05 A.M**
**<><><>**

**ಮುಖ್ಯಾಂಶಗಳು**

- **ಮೈಸೂರು ವಿಶ್ವವಿದ್ಯಾಲಯದ ಬ್ಯಾಕ್ ಲಾಗ್ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಭರವಸೆ.**
- **ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವಂತೆ ಉಪ ಮುಖ್ಯಮಂತ್ರಿ ಅಧಿಕಾರಿಗಳಿಗೆ ಸೂಚನೆ.**
- **ಕ್ವಾಂಟಮ್ ತಂತ್ರಜ್ಞಾನ–ಸೆಮಿಕಂಡಕ್ಟರ್ ಸಹಭಾಗಿತ್ವಕ್ಕೆ ಪೆನಾಂಗ್ ರಾಜ್ಯ ಒಲವು.**
- **ಮುಂಬರುವ ದಿನಗಳಲ್ಲಿ ಡಿಜಿಟಲ್ ವೇದಿಕೆಯ ಮೂಲಕ ಆನ್‌ಲೈನ್ ಉದ್ಯೋಗ ಮೇಳ ಆಯೋಜನೆ ಸರ್ಕಾರದ ಗುರಿ.**

**ಈಗ ವಾರ್ತೆಗಳ ವಿವರ**

**ಮೈಸೂರು ವಿಶ್ವವಿದ್ಯಾಲಯದ ಬ್ಯಾಕ್ ಲಾಗ್** ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ. ಮೈಸೂರು ವಿಶ್ವವಿದ್ಯಾಲಯದ ಮಾನಸ ಗಂಗೋತ್ರಿಯ ಸೆನೆಟ್ ಭವನದಲ್ಲಿ, ನೂತನ ವಿಧಾನ ಪರಿ ´ತ್ ಸದಸ್ಯ ಡಾಕ್ಟರ್ ಕೆ. ಶಿವಕುಮಾರ್ ಅವರಿಗೆ ಆಯೋಜಿಸಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಾಮಾಜಿಕ ವ್ಯವಸ್ಥೆಯ ಅರಿವೇ ನಿಜವಾದ ಶಿಕ್ಷಣ. ಬಾಬಾ ಸಾಹೇಬ್ ಅಂಬೇಡ್ಕರ್, ಮಹಾತ್ಮಗಾಂಧೀಜಿಯವರು ಹಾಕಿಕೊಟ್ಟ ದಾರಿಯಲ್ಲಿ ನಡೆಯುವ ಪ್ರಾಮಾಣಿಕ ಪ್ರಯತ್ನವನ್ನು ನಾವೆಲ್ಲರೂ ಮಾಡಬೇಕು ಎಂದರು.

**<><><>**

**ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸಿಬ್ಬಂದಿ ಸಾರ್ವಜನಿಕರೊಂದಿಗೆ** ಪಾರದರ್ಶಕತೆ ಹಾಗೂ ಮಾನವೀಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಬೆಂಗಳೂರಿನಲ್ಲಿ, ‘ಆಡಳಿತ ಸುಧಾರಣೆಗಳು ಹಾಗೂ ಸಾರ್ವಜನಿಕ ಅಹವಾಲು ನಿರ್ವಹಣೆ ವಿ ´ಯದಡಿ, ಬಿಡಿಎ ನೌಕರರಿಗೆ ಆಯೋಜಿಸಲಾದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಾಧಿಕಾರದ ಕಚೇರಿಗೆ ಹೆಚ್ಚಿನ ಸಂಖ್ಯೆಯಲ್ಲಿ ಜನರು ಆಗಮಿಸುತ್ತಿದ್ದು, ಅವ್ಯವಹಾರಗಳಿಗೆ ಅವಕಾಶ ಕೊಡದೆ, ನೇರವಾಗಿ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಪರಿಣಾಮಕಾರಿ ರೀತಿಯಲ್ಲಿ ಕುಂದುಕೊರತೆಗಳ ನಿವಾರಣೆಯಾಗಬೇಕು. ಆಡಳಿತದಲ್ಲಿ ಪಾರದರ್ಶಕತೆ ತರಬೇಕು ಎಂದರು.

**<><><>**

**ಮಲೇ ್ಯದ ಪ್ರಮುಖ** ಸೆಮಿಕಂಡಕ್ಟರ್ ಹಬ್ ಆಗಿರುವ ಪೆನಾಂಗ್ ರಾಜ್ಯವು, ಕರ್ನಾಟಕದೊಂದಿಗೆ ಕ್ವಾಂಟಮ್ ತಂತ್ರಜ್ಞಾನ ಅಭಿವೃದ್ಧಿ ಹಾಗೂ ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಸಹಭಾಗಿತ್ವಕ್ಕೆ ಆಸಕ್ತಿ ವ್ಯಕ್ತಪಡಿಸಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್. ಭೋಸರಾಜು ತಿಳಿಸಿದ್ದಾರೆ. ವಿಕಾಸಸೌಧದಲ್ಲಿ ಪೆನಾಂಗ್ ರಾಜ್ಯದ ಉಪಮುಖ್ಯಮಂತ್ರಿ ಜಗದೀಪ್ ಸಿಂಗ್ ಡಿಯೋ ನೇತೃತ್ವದ ಉನ್ನತ ಮಟ್ಟದ ನಿಯೋಗದೊಂದಿಗೆ ನಡೆದ ಸಭೆಯ ನಂತರ ಅವರು ಈ ಮಾಹಿತಿ ನೀಡಿದರು. ಭೌಗೋಳಿಕವಾಗಿ ಸಣ್ಣ ರಾಜ್ಯವಾಗಿದ್ದರೂ ಪೆನಾಂಗ್, ಇಂದು ಜಾಗತಿಕ ಮಟ್ಟದ ಸೆಮಿಕಂಡಕ್ಟರ್ ಶಕ್ತಿಯಾಗಿ ಹೊರಹೊಮ್ಮಿದೆ. ಇದರ

ಹಿಂದೆ ಬಲಿ ್ಠ ಉದ್ಯಮ–ಸಂಶೋಧನಾ ಸಹಭಾಗಿತ್ವ ಪ್ರಮುಖ ಕಾರಣವಾಗಿದೆ. ಈ ಯಶಸ್ಸಿನಲ್ಲಿ ಪೆನಾಂಗ್ ವಿಶ್ವವಿದ್ಯಾಲಯವು ನಿರ್ಣಾಯಕ ಪಾತ್ರವಹಿಸಿದ್ದು, ಉದ್ಯಮಗಳಿಗೆ ನೇರವಾಗಿ ಬೆಂಬಲ ನೀಡುವ ಸಂಶೋಧನಾ ಪರಿಸರ ವ್ಯವಸ್ಥೆಯನ್ನು ನಿರ್ಮಿಸಿದೆ. ಇದೇ ಮಾದರಿಯನ್ನು ಕರ್ನಾಟಕದೊಂದಿಗೆ ಹಂಚಿಕೊಳ್ಳಲು ಪೆನಾಂಗ್ ಸಿದ್ಧವಿದೆ ಎಂದರು.

<><><>

**ನಿರುದ್ಯೋಗ ಮುಕ್ತ ಸಮಾಜ ನಿರ್ಮಾಣ ರಾಜ್ಯ ಸರ್ಕಾರದ ಗುರಿ ಎಂದು ಕೌಶಲ** ಅಭಿವೃದ್ಧಿ ಖಾತೆ ಸಚಿವ ಡಾಕ್ಟರ್ ಶರಣಪ್ರಕಾಶ್ ಪಾಟೀಲ್ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಮೂಲಕ ಮಾಹಿತಿ ಹಂಚಿಕೊಂಡಿರುವ ಅವರು, ನಿರುದ್ಯೋಗ ಮುಕ್ತ ಸಮಾಜದ ನಿರ್ಮಾಣಕ್ಕಾಗಿ ರಾಜ್ಯ ಸರ್ಕಾರ ಜಿಲ್ಲಾ ಮಟ್ಟದಲ್ಲಿ ಉದ್ಯೋಗ ಮೇಳಗಳನ್ನು ಆಯೋಜಿಸುತ್ತಿದೆ. ಮುಂದಿನ ದಿನಗಳಲ್ಲಿ ಡಿಜಿಟಲ್ ವೇದಿಕೆಯ ಮೂಲಕ ಆನ್‌ಲೈನ್ ಉದ್ಯೋಗ ಮೇಳಗಳನ್ನು ನಡೆಸಿ, ಉದ್ಯೋಗದಾತರು ಮತ್ತು ಉದ್ಯೋಗಾಕಾಂಕ್ಷಿಗಳ ನಡುವೆ ನೇರ ಸಂಪರ್ಕ ಸೇತುವೆಯಾಗುವುದು ಪ್ರಮುಖ ಗುರಿಯಾಗಿದೆ ಎಂದು ತಿಳಿಸಿದ್ದಾರೆ.

<><><>

**ರಾಜ್ಯ ಚುನಾವಣಾ ಆಯೋಗವು ವಿದ್ಯುನ್ಮಾನ ಮತಯಂತ್ರಗಳ –ಇವಿಎಂ ಬಳಕೆ** ಬಗ್ಗೆ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ ಎಂದು ಆಯೋಗದ ಕಾರ್ಯದರ್ಶಿ ಡಾಕ್ಟರ್ ನಾಗರಾಜ ತಿಳಿಸಿದ್ದಾರೆ. ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಕೆಲವು ದಿನಪತ್ರಿಕೆಗಳಲ್ಲಿ ರಾಜ್ಯ ಚುನಾವಣಾ ಆಯೋಗವು ವಿದ್ಯುನ್ಮಾನ ಮತಯಂತ್ರಗಳ ಬಳಕೆ ಬಗ್ಗೆ ಮೇ 2025 ರಲ್ಲಿ ನಡೆಸಿದ ಸಮೀಕ್ಷೆಯಲ್ಲಿ, ಕರ್ನಾಟಕದ ಶೇಕಡ 83 ರ ್ಟ ಜನರು ವಿಶ್ವಾಸ ವ್ಯಕ್ತಪಡಿಸಿದ್ದಾರೆ ಎಂಬ ಸುದ್ದಿಗಳನ್ನು ಪ್ರಕಟಿಸಿರುವುದು ಆಯೋಗದ ಗಮನಕ್ಕೆ ಬಂದಿದೆ. ರಾಜ್ಯ ಚುನಾವಣಾ ಆಯೋಗವು ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸುವ ಅಧಿಕಾರ ಹೊಂದಿದೆ. ಆದರೆ ಇತ್ತೀಚೆಗೆ ಕೆಲವು ಪತ್ರಿಕೆಗಳಲ್ಲಿ ಪ್ರಕಟವಾಗಿರುವಂತೆ ಇವಿಎಂ ಗಳ ಬಳಕೆ ಬಗ್ಗೆ ಆಯೋಗವು ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ ಎಂಬುದನ್ನು ಅವರು ಸ್ಪ ್ಟಪಡಿಸಿದ್ದಾರೆ.

<><><>

**ಭಾರತೀಯ ಗುಣಮಟ್ಟ ಬ್ಯೂರೋ–ಬಿಐಎಸ್ ನ 79ನೇ ಸಂಸ್ಥಾಪನಾ ದಿನದ** ಅಂಗವಾಗಿ ಕೇಂದ್ರ ಗ್ರಾಹಕ ವ್ಯವಹಾರಗಳು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಪ್ರಲ್ಹಾದ್ ಜೋಶಿ ದೆಹಲಿಯಲ್ಲಿ ನಿನ್ನೆ ವಿವಿಧ ಉಪಕ್ರಮಗಳಿಗೆ ಚಾಲನೆ ನೀಡಿದರು. ಬಿಐಎಸ್ ಸ್ಟಾಂಡರ್ಡ್ ಪೋರ್ಟಲ್, ಸಕ್ಷಮ್ ಮಾನ್ಯತಾ ಯೋಜನೆಗಳು ಈ ಉಪಕ್ರಮಗಳಲ್ಲಿ ಸೇರಿವೆ. ಇದೇ ವೇಳೆ, ಐಐಟಿ ಧಾರವಾಡ, ಐಐಟಿ ಪಾಲಕ್ಕಾಡ್ ಮತ್ತು ಎನ್‌ಐಟಿ ಅರುಣಾಚಲ ಪ್ರದೇಶದೊಂದಿಗೆ ಡಿಜಿಟಲ್ ರೂಪದಲ್ಲಿ ಒಡಂಬಡಿಕೆಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಸಚಿವ ಪ್ರಲ್ಹಾದ್ ಜೋಷಿ, ಬ್ಯೂರೋ ಆಫ್ ಇಂಡಿಯನ್ ಸ್ಟಾಂಡರ್ಡ್ಸ್ – ಬಿಐಎಸ್ ಕೇವಲ ಸಂಸ್ಥೆಯಾಗಿರದೆ, ರಾಷ್ಟ್ರದ ಪಯಣಕ್ಕೆ ರೂಪು ನೀಡಿದ ಬಲಶಾಲಿ ಪರಂಪರೆಯನ್ನು ಹೊಂದಿದೆ. ಉದ್ಯಮಸ್ನೇಹಿ ವಾತಾವರಣವನ್ನು ಪ್ರೋತ್ಸಾಹಿಸುವುದರೊಂದಿಗೆ ದೇಶದ ಗುಣಮಟ್ಟ ಪರಿಸರವನ್ನು ಬಲಪಡಿಸುವಲ್ಲಿ ಸಂಸ್ಥೆ ಪ್ರಮುಖ ಪಾತ್ರ ವಹಿಸಿದೆ. ಅನೇಕ ವಲಯಗಳಲ್ಲಿ 'ಬಿಐಎಸ್ ಮಾರ್ಕ್' ವಿಶ್ವಾಸಾರ್ಹ ಚಿನ್ಹೆಯಾಗಿ ಹೊರಹೊಮ್ಮಿದ್ದು, ಈ ಮೂಲಕ ಕೃಷಿ, ತಯಾರಿಕೆ ಮತ್ತು ತಂತ್ರಜ್ಞಾನ ಪ್ರಗತಿಗೆ ಕೊಡುಗೆ ನೀಡುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

<><><>

**ಈಗ ಪ್ರಕಟಣೆ.**

**ನಂತರ ಪ್ರದೇಶ ಸಮಾಚಾರ ಮುಂದುವರೆಯುವುದು..**

<><><>

**(40 ಸೆಕೆಂದುಗಳು)**

**<><><>**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..**

**<><><>**

**ಹೊಸದಿಲ್ಲಿಯಲ್ಲಿ ಜನೆವರಿ 26 ರಂದು ನಡೆಯಲಿರುವ,** 77 ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ, ದಕ್ಷಿಣ ಕನ್ನಡ ಜಿಲ್ಲೆ, ಪುತ್ತೂರು ತಾಲೂಕು, ಒಳಮೊಗ್ರು, ಗ್ರಾಮಪಂಚಾಯತ್ ಅಧ್ಯಕ್ಷೆ ತ್ರಿವೇಣಿ. ಕೆ ಪಲ್ಲತ್ತಾರು ವಿಶೇ ' ಆಹ್ವಾನಿತರಾಗಿ, ಆಯ್ಕೆಯಾಗಿದ್ದಾರೆ. ಒಳಮೊಗ್ರು ಗ್ರಾಮ ಪಂಚಾಯತ್‌ನಲ್ಲಿ ಅವರು, ಕೈಗೊಂಡ ಸ್ವಚ್ಛತಾ ಕಾರ್ಯಕ್ರಮಗಳು, ಹಾಗೂ ಪಂಚಾಯತ್ ಅಭಿವೃದ್ಧಿಗೆ ನೀಡಿದ ಕೊಡುಗೆಗಳು ಸೇರಿದಂತೆ, ಗಣರಾಜ್ಯೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳುವ ಅವಕಾಶ ದೊರಕಿರುವ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ಹಂಚಿಕೊಂಡಿದ್ದಾರೆ ತ್ರಿವೇಣಿ ಪಲ್ಲತ್ತಾರು.

**<><><>**

**ತ್ರಿವೇಣಿ ಪಲ್ಲತ್ತಾರು ಧ್ವನಿ (60 ಸೆಕೆಂದುಗಳು)**

**<><><>**

**ಭಾರತೀಯ ರೈಲ್ವೆಯು "ರೈಲ್ ಒನ್ ಮೊಬೈಲ್ ಅಪ್ಲಿಕೇ 'ನ್" ಮೂಲಕ ಕಾಯ್ದಿರಿಸದ** ಟಿಕೆಟ್‌ಗಳನ್ನು ಯು.ಪಿ.ಐ., ಡೆಬಿಟ್, ಕ್ರೆಡಿಟ್ ಕಾರ್ಡ್‌ಗಳು ಮತ್ತು ಆರ್–ವ್ಯಾಲೆಟ್ ಸೇರಿದಂತೆ ಯಾವುದೇ ಡಿಜಿಟಲ್ ಪಾವತಿ ವಿಧಾನದಲ್ಲಿ ಖರೀದಿಸಿದರೂ ಕೂಡಾ ಶೇಕಡ 3 ರಷ್ಟು ರಿಯಾಯಿತಿಯನ್ನು ನೀಡಲಿದೆ. ಈ ಮೊದಲು, ಈ ರಿಯಾಯಿತಿ ಆರ್–ವ್ಯಾಲೆಟ್ ಮೂಲಕ ಮಾಡಿದ ಪಾವತಿಗಳಿಗೆ ಮಾತ್ರ ಅನ್ವಯವಾಗುತ್ತಿತ್ತು. ಈಗ, ಪ್ರಯಾಣಿಕರು ಯಾವುದೇ ಡಿಜಿಟಲ್ ಪಾವತಿ ಆಯ್ಕೆಯ ಮೂಲಕ ಪಾವತಿಸಿದರೂ ಈ ಪ್ರಯೋಜನ ದೊರೆಯಲಿದೆ. ಎಲ್ಲ ಡಿಜಿಟಲ್ ಪಾವತಿಗಳ ಮೇಲೆ ಶೇಕಡ 3 ರ ರಿಯಾಯಿತಿಯ ಕೊಡುಗೆಯು ಇದೇ ತಿಂಗಳ 14 ರಿಂದ ಜುಲೈ 14 ರವರೆಗೆ ಲಭ್ಯವಿರಲಿದೆ. ರೈಲ್‌ಒನ್ ಮೊಬೈಲ್ ಅಪ್ಲಿಕೇಶನ್, ಪ್ರಯಾಣಿಕರಿಗೆ ಕಾಯ್ದಿರಿಸಿದ ಮತ್ತು ಕಾಯ್ದಿರಿಸದ ಟಿಕೆಟ್‌ಗಳ ಖರೀದಿ ಮಾತ್ರವಲ್ಲದೆ, ರೈಲುಗಳ ನೈಜಕಾಲದ ಸಂಚಾರದ ಸ್ಥಿತಿಗತಿ ಹಾಗೂ ಪಿ.ಎನ್.ಆರ್ ಸ್ಥಿತಿಗತಿ ತಿಳಿಯಲು, ದೂರುಗಳ ನೋಂದಣಿ, ರೈಲ್ ಮದದ್ ಮೂಲಕ ಸಹಾಯ ಸೇರಿದಂತೆ ಮುಂತಾದ ಸೇವೆಗಳನ್ನು ಒದಗಿಸುತ್ತದೆ. ಈ ಮೊಬೈಲ್ ಅಪ್ಲಿಕೇಶನ್ ಎಂ–ಪಿನ್ ಮತ್ತು ಬಯೋಮೆಟ್ರಿಕ್ ದೃಢೀಕರಣದ ಮೂಲಕ ಸುರಕ್ಷಿತ ಲಾಗಿನ್ ಅನ್ನು ಖಾತ್ರಿಪಡಿಸುತ್ತದೆ. ತ್ವರಿತ ಮತ್ತು ಅನುಕೂಲಕರ ಪಾವತಿಗಾಗಿ ಆರ್–ವ್ಯಾಲೆಟ್ ಸೌಲಭ್ಯವನ್ನು ಒಳಗೊಂಡಿದೆ. ಈಗಾಗಲೇ ಇರುವ ಐ.ಆರ್.ಸಿ.ಟಿ.ಸಿ. ರೈಲ್ ಕನೆಕ್ಟ್ ಮತ್ತು ಯುಟಿಎಸ್ ಖಾತೆದಾರರು, ಅದೇ ರುಜುವಾತುಗಳನ್ನು ಬಳಸಿಕೊಂಡು ರೈಲ್‌ಒನ್ ಅಪ್ಲಿಕೇಶನ್‌ಗೆ ಲಾಗಿನ್ ಆಗಬಹುದಾಗಿದೆ. ಸುಲಭ ಮತ್ತು ನಗದು ರಹಿತ ಟಿಕೆಟ್ ಬುಕಿಂಗ್‌ಗಾಗಿ ರೈಲ್‌ಒನ್ ಮೊಬೈಲ್‌ಅಪ್ಲಿಕೇಶನ್ ಸೌಲಭ್ಯವನ್ನು ಬಳಸಿಕೊಳ್ಳಲು ಕೋರಲಾಗಿದೆ.

**<><><>**

**ಕರ್ನಾಟಕ ರಾಜ್ಯ ಕಾನೂನು** ಸೇವೆಗಳ ಪ್ರಾಧಿಕಾರವು ಜನವರಿ 14 ರಂದು ರಾಷ್ಟ್ರೀಯ ಲೋಕ್ ಅದಾಲತ್ ಅನ್ನು ರಾಜ್ಯಾದ್ಯಂತ ಎಲ್ಲಾ ನ್ಯಾಯಾಲಯಗಳ ಆವರಣದಲ್ಲಿ ವರ್ಚುವಲ್ ಮತ್ತು ಭೌತಿಕವಾಗಿ ನಡೆಸಲಿದೆ. ಹಾಗಾಗಿ ಬಾಕಿ ಇರುವ ವಿವಾದಗಳನ್ನು ಪರಿಹರಿಸಲು ಆಸಕ್ತಿ ಹೊಂದಿರುವ ಸಾರ್ವಜನಿಕರು ಹತ್ತಿರದ ತಾಲೂಕು ಕಾನೂನು ಸೇವೆಗಳ ಸಮಿತಿ ಅಥವಾ ಆಯಾ ನ್ಯಾಯಾಲಯದ ಆವರಣದಲ್ಲಿ ಸ್ಥಾಪಿಸಲಾದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವನ್ನು ಸಂಪರ್ಕಿಸಲು ಕೋರಲಾಗಿದೆ. ರಾಷ್ಟ್ರೀಯ ಲೋಕ ಅದಾಲತ್ ನಲ್ಲಿ ಇತ್ಯರ್ಥಕ್ಕಾಗಿ ಪೂರ್ವ–ವ್ಯಾಜ್ಯ ಪ್ರಕರಣಗಳನ್ನು ಸಹ ತೆಗೆದುಕೊಳ್ಳಲಾಗುತ್ತದೆ. ಹೈಕೋರ್ಟ್‌ಗಳಲ್ಲಿ ಬಾಕಿ ಇರುವ ಪ್ರಕರಣಗಳಿಗೆ, ದಾವೆದಾರರು ಬೆಂಗಳೂರು, ಕಲಬುರಗಿ, ಧಾರವಾಡದಲ್ಲಿ ಆಯಾ ಹೈಕೋರ್ಟ್‌ಗಳಲ್ಲಿ ಸ್ಥಾಪಿಸಲಾದ

ಹೈಕೋರ್ಟ ಕಾನೂನು ಸೇವೆಗಳ ಸಮಿತಿಯನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಚ್.ಶಶಿಧರ ಶೆಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><><>**

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

- **ಮೈಸೂರು ವಿಶ್ವವಿದ್ಯಾಲಯದ ಬ್ಯಾಕ್ ಲಾಗ್ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಭರವಸೆ.**
- **ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವಂತೆ ಉಪ ಮುಖ್ಯಮಂತ್ರಿ ಅಧಿಕಾರಿಗಳಿಗೆ ಸೂಚನೆ.**
- **ಕ್ವಾಂಟಮ್ ತಂತ್ರಜ್ಞಾನ–ಸೆಮಿಕಂಡಕ್ಟರ್ ಸಹಭಾಗಿತ್ವಕ್ಕೆ ಪೆನಾಂಗ್ ರಾಜ್ಯ ಒಲವು.**
- **ಮುಂಬರುವ ದಿನಗಳಲ್ಲಿ ಡಿಜಿಟಲ್ ವೇದಿಕೆಯ ಮೂಲಕ ಆನ್‌ಲೈನ್ ಉದ್ಯೋಗ ಮೇಳ ಆಯೋಜನೆ ಸರ್ಕಾರದ ಗುರಿ.**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ.**

**<><><>**